APRIL 12, 2026

AKASHAVANI - DHARWAD

PRADESH SAAMACHARA (KANNADA) 12 PM

<><><>

**ಹಾವೇರಿ ಜಿಲ್ಲೆಗೆ,** ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪೆನಿ ನಿಯಮಿತ, ಹೆಚ್ಚಿನ ಅನುದಾನ ಒದಗಿಸಿದೆ ಎಂದು, ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ಎಂ.ಎಲ್. ವೈಶಾಲಿ, ತಿಳಿಸಿದ್ದಾರೆ. ಹಾವೇರಿ ಜಿಲ್ಲೆ ಉಸ್ತುವಾರಿ ಸಚಿವ, ಶಿವಾನಂದ ಪಾಟೀಲ ಅಧ್ಯಕ್ಷತೆಯಲ್ಲಿ, ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ, ಅವರು ಮಾತನಾಡಿದರು. ವಿದ್ಯುತ್ ಸರಬರಾಜು ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ. 72 ಗಂಟೆಗಳಲ್ಲಿ ಟ್ರಾನ್ಸ್‌ಫಾರ್ಮರ್ ಬದಲಾವಣೆಗೆ, ಕ್ರಮವಹಿಸಲಾಗಿದೆ. ಜಿಲ್ಲೆಯಲ್ಲಿ 263 ಟಿ.ಸಿ. ಬಫರ್ ದಾಸ್ತಾನಿದೆ. ಅರ್ಜಿ ಹಿರಿತನದ ಆಧಾರದ ಮೇಲೆ, ವಿದ್ಯುತ್ ಸಂಪರ್ಕ ಕಲ್ಪಿಸಲಾಗುತ್ತಿದೆ. 560 ಲೈನ್‌ಮನ್‌ಗಳು ಆಯ್ಕೆಯಾಗಿದ್ದು, ಮೇ ಅಂತ್ಯದಲ್ಲಿ ಆಯ್ಕೆ ಪಟ್ಟಿ ಪ್ರಕಟಗೊಳ್ಳಲಿದೆ, ಎಂದು ಸಭೆಗೆ ತಿಳಿಸಿದರು.

<><><>

**ಪ್ರಸಕ್ತ ಸಾಲಿನ, ಡಾಕ್ಟರ್ ಬಿ.ಆರ್. ಅಂಬೇಡ್ಕರ ಪ್ರಶಸ್ತಿಗೆ,** ನಾಡಿನ ಐವರು ಸಾಧಕರು ಆಯ್ಕೆಯಾಗಿದ್ದಾರೆ. ಪ್ರಶಸ್ತಿ 5 ಲಕ್ಷ ರೂಪಾಯಿ ನಗದು, 20 ಗ್ರಾಂ ಚಿನ್ನ ಹಾಗೂ ಪ್ರಶಸ್ತಿ ಫಲಕವನ್ನು ಒಳಗೊಂಡಿದೆ. ಅಂಬೇಡ್ಕರ ಜಯಂತಿ ಹಿನ್ನೆಲೆ, ನಾಡಿದ್ದು 14ನೇ ತಾರೀಖು, ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಶಸ್ತಿಗಳನ್ನು ಪ್ರದಾನಿಸಿ, ಗೌರವಿಸಲಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ, ಅಂಬೇಡ್ಕರ ಪ್ರಶಸ್ತಿಗೆ ಭಾಜನರಾದ, ಬೆಳಗಾವಿ ಜಿಲ್ಲೆ ಗೋಕಾಕ ತಾಲೂಕಿನ ಮೂಡಲಗಿ ಗ್ರಾಮದ ಶೋಭಾ ಗಸ್ತಿ, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ– ಶೋಭಾ ಗಸ್ತಿ ( 65 ಸೆಕೆಂದುಗಳು)**

<><><>

**ಮಂಗಳೂರಿನ ಟಿ.ಎಂ.ಎ. ಪೈ ಕನ್ವೆನ್ಷನ್** ಸೆಂಟರ್‌ನಲ್ಲಿ ಆಯೋಜಿತ, ಅಂತಾರಾಷ್ಟ್ರೀಯ ಫಿಸಿಯೋಥೆರಪಿ ಸಮ್ಮೇಳನ, 'ಮಂಗಳೂರು ಫಿಸಿಯೋಕಾನ್– 2026'ಗೆ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಚಾಲನೆ ನೀಡಿದರು. ಬಳಿಕ ಮಾತನಾಡಿ, ಫಿಸಿಯೋಥೆರಪಿ ಕ್ಷೇತ್ರದಲ್ಲಿ, ಭಾರತ ಮಾತ್ರವಲ್ಲದೆ, ವಿಶ್ವದಲ್ಲಿಯೇ ವಿಪುಲ ಅವಕಾಶಗಳಿವೆ; ನಿರಂತರ ಸಂಶೋಧನೆ ಮೂಲಕ ಉತ್ತಮ ಸಾಧನೆ ಮಾಡಬಹುದು ಎಂದರು. ಖ್ಯಾತ ವೈದ್ಯ ಎಂ. ಶಾಂತಾರಾಮ ಶೆಟ್ಟಿ ಮಾತನಾಡಿ, ಪ್ರಸ್ತುತ ದೇಶದಲ್ಲಿ 700ಕ್ಕೂ ಅಧಿಕ ಫಿಸಿಯೋಥೆರಪಿ ಕಾಲೇಜುಗಳಿವೆ. ಸಾವಿರಾರು ವಿದ್ಯಾರ್ಥಿಗಳು ಶಿಕ್ಷಣ ಪಡೆಯುತ್ತಿದ್ದಾರೆ. ರೋಗಿಗಳ ನೋವು ಕಡಿಮೆ ಮಾಡುವಲ್ಲಿ ಫಿಸಿಯೋಥೆರಪಿಸ್ಟ್‌ಗಳ ಪಾತ್ರ ಮಹತ್ವದ್ದು ಎಂದು ತಿಳಿಸಿದರು.

<><><>

**ಇಂದು ಕನ್ನಡ ಚಲನ ಚಿತ್ರರಂಗದ** ಮೇರು ನಟ ಡಾಕ್ಟರ್ ರಾಜ್ ಕುಮಾರ್ ಹಾಗೂ ಭಾರತರತ್ನ ಸರ್ ಎಂ.ವಿಶ್ವೇಶ್ವರಯ್ಯನವರ ಪುಣ್ಯಸ್ಮರಣಾ ದಿನ. ಈ ಹಿನ್ನೆಲೆಯಲ್ಲಿ ಸಾಮಾಜಿಕ ಮಾಧ್ಯಮದ ಮೂಲಕ ಮಹಾನ್ ಚೇತನರಿಗೆ ಗೌರವ ನಮನ ಸಲ್ಲಿಸಿರುವ ಸಚಿವ ಡಾಕ್ಟರ್ ಎಂ.ಬಿ.ಪಾಟೀಲ್, ಕನ್ನಡ ಚಿತ್ರರಂಗದ ಅಪ್ರತಿಮ ಚೇತನ, ಗಾನಗಂಧರ್ವ, ಪದ್ಮಭೂಷಣ ಡಾಕ್ಟರ್ ರಾಜ್ ಕುಮಾರ್ ಕನ್ನಡ ನೆಲದ ಅಸ್ಮಿತೆ, ಸರಳತೆಯ ಸಾಕಾರಮೂರ್ತಿಯಾಗಿದ್ದರು. ಅವರು ಇಂದಿಗೂ ಹಾಗೂ ಎಂದೆಂದಿಗೂ ಕನ್ನಡಿಗರ ಹೃದಯ ಸಾಮ್ರಾಜ್ಯದ ಅಧಿಪತಿ. ಕಲೆ, ಸಂಸ್ಕೃತಿ ಮತ್ತು ಕನ್ನಡಾಭಿಮಾನಕ್ಕೆ ಅವರೇ ದಾರಿದೀಪ. ಅವರ ಆದರ್ಶಗಳು ಸದಾ ನಮ್ಮೊಂದಿಗೆ ಇರಲಿವೆ ಎಂದು ತಿಳಿಸಿದ್ದಾರೆ. ಕನ್ನಡನಾಡಿನ ಕೀರ್ತಿ ಪತಾಕೆಯನ್ನು ವಿಶ್ವ ಮಟ್ಟದಲ್ಲಿ ಬೆಳಗಿದ ಮಹಾನ್ ಮೇಧಾವಿ, ಭಾರತರತ್ನ **ಸರ್ ಎಂ.ವಿಶ್ವೇಶ್ವರಯ್ಯನವರ** ತಾಂತ್ರಿಕತೆ, ವೈಜ್ಞಾನಿಕ ಕೌಶಲ್ಯತೆ ನಮ್ಮೆಲ್ಲ ಯುವ ಎಂಜಿನಿಯರ್‌ಗಳಿಗೆ ಮಾದರಿಯಾಗಿದೆ ಎಂದಿದ್ದಾರೆ.

<><><>

**ಗಣಿತಶಾಸ್ತ್ರದ, *'ಡಾಮಿನೇ 'ನ್ ಥಿಯರಿ'*** ಸಂಶೋಧನೆಯಲ್ಲಿ ಜಾಗತಿಕ ಮಟ್ಟದಲ್ಲಿ 6ನೇ ಶ್ರೇಯಾಂಕ ಪಡೆದಿರುವ ಪ್ರೊಫೆಸರ್ ಎಚ್.ಬಿ. ವಾಲೀಕಾರ ಅವರಿಗೆ ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯದ ಸಭಾಗೃಹದಲ್ಲಿ ಅಭಿನಂದನಾ ಸಮಾರಂಭ ಜರುಗಿತು.ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ, ಪ್ರಲ್ಹಾದ ಜೋಶಿ ಪಾಲ್ಗೊಂಡು ಮಾತನಾಡಿ ಗ್ರಾಮೀಣ ಭಾಗದ ಪ್ರತಿಭೆಯಾಗಿ ಗಣಿತಶಾಸ್ತ್ರದಲ್ಲಿ, ವಿಶ್ವ ಮಟ್ಟದ ಸಂಶೋಧನೆ ಕೈಗೊಂಡು ನಾಡಿಗೆ ಕೀರ್ತಿ ತಂದಿದ್ದಾರೆ, ಎಂದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

<><><>